(ಸದನದ ಕಲಾಪವು 10 ಗಂಟೆ 19 ನಿಮಿಷಕ್ಕೆ ಪ್ರಾರಂಭವಾಯಿತು. ಮಾನ್ಯ ಸಭಾಧ್ಯಕ್ಷರು ಅಧ್ಯಕ್ಷ ಪೀಠವನ್ನಲಂಕರಿಸಿದರು)

(ಈ ಹಂತದಲ್ಲಿ ಬಿಜೆಪಿ ಸದಸ್ಯರುಗಳು ಬಾವಿಯಲ್ಲಿ ನಿಂತು ಧರಣಿ ಮಾಡುತ್ತಿದ್ದರು)

ಅಧ್ಯಕ್ಷರು:– ಒಂದು ನಿಮಿಷ ತಾಳಿ.

ಶ್ರೀ ಎನ್.ಹೆಚ್. ಕೋನರೆಡ್ಡಿ:– ಮಾನ್ಯ ಅಧ್ಯಕ್ಷರೆ, ರೈತರ ಸಮಸ್ಯೆಗಳ ಬಗ್ಗೆ ಚರ್ಚೆಯಾಗಬೇಕು.

ಅಧ್ಯಕ್ಷರು:– ಒಂದು ಪ್ರಕಟಣೆ ಇದೆ.

ಶ್ರೀ ಜಗದೀಶ್ ಶೆಟ್ಟರ್:– ಮಾನ್ಯ ಅಧ್ಯಕ್ಷರೆ, ತಾವೇನು ರೂಲಿಂಗ್ ಕೊಟ್ಟಿದ್ದೀರಿ, ಅದನ್ನು reconsider ಮಾಡಿ.

ಶ್ರೀ ಎನ್.ಹೆಚ್. ಕೋನರೆಡ್ಡಿ:– ಇಲ್ಲಿಯ ದೊಂಬರಾಟ ನೋಡಿ ಎಲ್ಲರಿಗೂ ಸಾಕಾಗಿದೆ.

1. ಪ್ರಕಟಣೆ

ಅಧ್ಯಕ್ಷರು:– ಈಗ ಒಂದು ಪ್ರಕಟಣೆ ಇದೆ, ದಯವಿಟ್ಟು ತಾಳಿ. ವಿಧಾನಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ನಡವಳಿಕೆ ನಿಯಮ 118 ಮೇರೆಗೆ ಈ ಕೆಳಕಂಡ ವಿಧೇಯಕಗಳನ್ನು ದಿನಾಂಕ: 19.12.2014ರಂದು ಅಂಗೀಕರಿಸಲಾಗಿದೆ ಎಂದು ತಿಳಿಸಿರುತ್ತಾರೆ.

1. ಕರ್ನಾಟಕ ನ್ಯಾಯಾಲಯ ಶುಲ್ಕಗಳು ಮತ್ತು ದಾವೆಗಳ ಮೌಲ್ಯ ನಿರ್ಣಯ (ತಿದ್ದುಪಡಿ) ವಿಧೇಯಕ, 2014
2. ಕರ್ನಾಟಕ ಪಶು ವೈದ್ಯಕೀಯ, ಪಶು ವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 2014
3. ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2013

4. ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ, 2014
5. ಭಾರತ ಉತ್ತರಾಧಿಕಾರ (ಕರ್ನಾಟಕ ತಿದ್ದುಪಡಿ) ವಿಧೇಯಕ, 2014
6. ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2014
7. ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕ, 2014

ಅಧ್ಯಕ್ಷರು:– ಮಾನ್ಯ ಕಾನೂನು ಸಚಿವರೆ, ಪ್ರಶ್ನೆಗಳನ್ನು ಮಂಡನೆ ಮಾಡಿ.

2. ಚುಕ್ಕೆ ಗುರ್ತಿನ ಪ್ರಶ್ನೆಗಳು ಮತ್ತು ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, ದಿನಾಂಕ:19.12.2014ರ ಒಂಭತ್ತನೇ ಪಟ್ಟಿಯಿಂದ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 230 ಪ್ರಶ್ನೆಗಳ ಪೈಕಿ 217 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

(ಅನುಬಂಧ–1)

3. ಶಾಸನ ರಚನೆ

ವಿಧೇಯಕಗಳ ಮಂಡನೆ

ಅ. 1. ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014

ಶ್ರೀ ಬಿ. ರಮಾನಾಥ ರೈ (ಅರಣ್ಯ ಸಚಿವರು):– ಮಾನ್ಯ ಅಧ್ಯಕ್ಷರೆ,

2014ನೇ ಸಾಲಿನ ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವನೆಯನ್ನು ಮಂಡಿಸಲಾಯಿತು.